# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2050 |
| ಮಾನ್ಯ ಸದಸ್ಯರ ಹೆಸರು | ಶ್ರೀ ಟಿ.ಎನ್.ಜವರಾಯಿಗೌಡ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 25.03.2026 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಭೂಮಾಪಕರ ಕೊರತೆ, ಸಕಾಲಕ್ಕೆ ಧಕ್ಕದ ಜಮೀನು ಪೋಡಿ, ರಾಜ್ಯದಲ್ಲಿ 2.34 ಲಕ್ಷ ಅರ್ಜಿ ಬಾಕಿ ಇರುವ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದು ಕೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಬಂದಿದೆ. |
| (ಆ) | ರೈತರ ಜಮೀನಿನ ಅಭಿವೃದ್ಧಿ, ಭೂಪರಿವರ್ತನೆ, ವಿಭಾಗ ಅಥವಾ ಮಾರಾಟ ಮಾಡಲು ಸಾಧ್ಯವಿಲ್ಲದಿರುವುದು ಜತೆಗೆ ಸಾಲ ಸಹಾಯಧನವೂ ದೊರಕದೆ ರೈತರು, ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದನ್ನು ತಪ್ಪಿಸಲು ಸರ್ಕಾರ ನಿಗಧಿತ ಅವಧಿಯೊಳಗೆ ಪೋಡಿ ಪ್ರಕರಣಗಳನ್ನು ವಿಲೇವಾರಿ ಮಾಡಲು ಕಾಲಮಿತಿಯನ್ನು ನಿಗಧಿಪಡಿಸಲಾಗುವುದೇ; | ಬಾಕಿಯಿರುವ ಪೋಡಿ ಅರ್ಜಿಗಳ ಶೀಘ್ರ ವಿಲೇವಾರಿಗೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br><br>1. ರಾಜ್ಯದಲ್ಲಿ ಎಲ್ಲಾ ರೀತಿಯ ಪೋಡಿ ಪ್ರಕರಣಗಳನ್ನು ತಂತ್ರಾಂಶದ ಮುಖಾಂತರ ಆನ್‌ಲೈನ್ ನಲ್ಲಿ ಸ್ವೀಕರಿಸಿ ನಿರ್ವಹಿಸುವ ಮೂಲಕ ಪ್ರಕರಣಗಳ ವಿಲೇವಾರಿಯಲ್ಲಿ ಯಾವುದೇ ವಿಳಂಬಕ್ಕೆ ಅವಕಾಶವಿಲ್ಲದಂತೆ ಕ್ರಮ ವಹಿಸಲಾಗುತ್ತಿದೆ.<br>2. ದಿನಾಂಕ 25-11-2024ರ ಸರ್ಕಾರದ ಆದೇಶದಲ್ಲಿ ನಮೂನೆ 1 ರಿಂದ 5 ಮತ್ತು 6 ರಿಂದ 10 ಗಳ ಭರ್ತಿ ಮತ್ತು ದೃಢೀಕರಿಸುವ ಪ್ರಕ್ರಿಯೆ ಯನ್ನು ಸರಳೀಕರಿಸಲಾಗಿದೆ.<br><br>ಅದರಂತೆ, ನಮೂನೆ 1 ರಿಂದ 5 ಗಳಿಗೆ ಸಂಬಂಧಿಸಿದ ಉಪ ವಿಭಾಗಾಧಿಕಾರಿಗಳು ಮತ್ತು ಭೂದಾಖಲೆಗಳ ಉಪ ನಿರ್ದೇಶಕರು ಮೇಲು ಸಹಿ ಮಾಡಬೇಕಾಗಿರುವ ಕ್ರಮವನ್ನು ರದ್ದುಪಡಿಸಿ, ಇದನ್ನು ದೃಢೀಕರಿಸುವ ಜವಾಬ್ದಾರಿಯನ್ನು ತಹಶೀಲ್ದಾರ್‌ರವರಿಗೆ ಸೀಮಿತಗೊಳಿಸಿದೆ ಮತ್ತು ಸರ್ಕಾರಿ ಸ.ನಂ ನ ಎಲ್ಲಾ ಮಂಜೂರಿದಾರರಿಗೆ ಏಕ ಕಾಲದಲ್ಲಿ ದುರಸ್ತಿ ಪಡಿಸುವಂತೆ ಸೂಚಿಸಿದೆ.<br><br>3. ದರಖಾಸ್ತು ಪೋಡಿ, 11ಇ, ಹದ್ದುಬಸ್ತು ಮುಂತಾದ ಎಲ್ಲಾ ತರಹದ ಅರ್ಜಿಗಳನ್ನು ಸರ್ಕಾರಿ ಭೂಮಾಪಕರೊಂದಿಗೆ ಪರವಾನಗಿ ಭೂಮಾಪಕರ ಸೇವೆಯನ್ನು ಸಹ ಬಳಸಿಕೊಳ್ಳಲಾಗುತ್ತಿದೆ.<br>4. ಕಂದಾಯ ಇಲಾಖೆಯಿಂದ ಪಹಣಿ ತಿದ್ದುಪಡಿ ಕುರಿತು ಕಂದಾಯ ಅದಾಲತ್ ಗಳನ್ನು ನಡೆಸಲಾಗುತ್ತಿದೆ.<br>5. ವಿಡಿಯೋ ಸಂವಾದ ಮತ್ತು ವಿಭಾಗವಾರು ಅಧಿಕಾರಿ ಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಿ ಹೆಚ್ಚಿನ ಪ್ರಗತಿ ಸಾಧಿಸಲು ಸೂಕ್ತ ಮಾರ್ಗದರ್ಶನ ಮತ್ತು ಅಗತ್ಯ ಸೂಚನೆ ನೀಡಲಾಗುತ್ತಿದೆ.<br>6. ಹೆಚ್ಚಿನ ಪ್ರಕರಣಗಳು ಬಾಕಿ ಇರುವ ತಾಲ್ಲೂಕುಗಳಿಗೆ ಕಡಿಮೆ ಪ್ರಕರಣಗಳು ಬಾಕಿ ಇರುವ ತಾಲ್ಲೂಕಿನಿಂದ ಭೂಮಾಪಕರನ್ನು ನಿಯೋಜನೆ ಮಾಡಿ ಪ್ರಕರಣಗಳನ್ನು ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>7. ಅಳತೆ ಕಾರ್ಯವನ್ನು ತ್ವರಿತವಾಗಿ ನಿರ್ವಹಿಸಲು ಭೂಮಾಪಕರಿಗೆ ರೋವರ್ ಉಪಕರಣಗಳನ್ನು ಹಂತ ಹಂತವಾಗಿ ಖರೀದಿಸಿ ಒದಗಿಸಲಾಗುತ್ತಿದೆ. ಈಗಾಗಲೇ |

| | | |
|---|---|---|
| | | ಸುಮಾರು 590 ರೋವರ್‌ಗಳನ್ನು ಭೂಮಾಪಕರಿಗೆ ಒದಗಿಸಲಾಗಿದೆ.<br><br>ರಾಜ್ಯದಲ್ಲಿ ಸಾರ್ವಜನಿಕರು ಅಳತೆ ಕೋರಿ ಸಲ್ಲಿಸುವ ಅರ್ಜಿಗಳಲ್ಲಿ ಯಾವುದೇ ಸಮಸ್ಯೆಗಳಿಲ್ಲದೇ ಇದ್ದಲ್ಲಿ ಸರಾಸರಿಯಾಗಿ ಸ್ವೀಕೃತಿಯಾದ ದಿನದಿಂದ 36 ದಿನಗಳು ಮತ್ತು ಭೂಮಾಪಕರಿಗೆ ಹಂಚಿಕೆಯಾದ ದಿನದಿಂದ 24 ದಿನಗಳಲ್ಲಿ ವಿಲೇವಾರಿ ಮಾಡಲಾಗುತ್ತಿದೆ. |
| (ಇ) | ಸರ್ವೇಯರ್ ಇಲ್ಲದಿರುವುದೇ ಇದಕ್ಕೆ ಕಾರಣವೇ; ಸರ್ವೇಯರ್ ಇಲ್ಲದಿರುವುದರಿಂದ ಸರ್ವೇಯರ್ ಗಳನ್ನು ನೇಮಕ ಮಾಡಿ ಕೊಳ್ಳಲು ಸರ್ಕಾರ ತಕ್ಷಣವೇ ಕ್ರಮ ವಹಿಸುವುದೇ? | ಬಾಕಿ ಇರುವ ಅರ್ಜಿಗಳ ಶೀಘ್ರ ವಿಲೇವಾರಿ ಮಾಡುವ ಕುರಿತು ಭೂಮಾಪನ ಇಲಾಖೆಗೆ ಹೆಚ್ಚುವರಿಯಾಗಿ 1,000 ಪರವಾನಗಿ ಭೂಮಾಪಕರನ್ನು ಆಯ್ಕೆ ಮಾಡಿಕೊಳ್ಳುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ ಮತ್ತು 750 ಸರ್ಕಾರಿ ಭೂಮಾಪಕರನ್ನು ನೇಮಕಾತಿ ಮಾಡಿಕೊಳ್ಳುವ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ. |

ಸಂಖ್ಯೆ: ಕಂಇ **90** ಎಸ್ ಎಸ್ ಸಿ **2026**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು